<u>**ಕರ್ನಾಟಕ ಸರ್ಕಾರ**</u>

ಸಂಖ್ಯೆ: ಕಂಇ 158 ಟಿಎನ್ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:16-04-2021.

<u>**ಆದೇಶ**</u>

1) ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ:40-3/2020-ಡಿಎಂ-I(ಎ), ದಿನಾಂಕ:23.03.2021ರಲ್ಲಿ ಕೋವಿಡ್-19 ಸೋಂಕು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ದಿನಾಂಕ:30.04.2021ರವರೆಗೆ ಜಾರಿಯಲ್ಲಿರುತ್ತದೆ. ಅದರನ್ವಯ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿಎನ್ಆರ್ 2020, ದಿನಾಂಕ:29.03.2021ರಲ್ಲಿ ಕೋವಿಡ್-19 ವೈರಾಣು ಸೋಂಕು ಪರೀಕ್ಷೆ, ಪತ್ತೆ ಮತ್ತು ಚಿಕಿತ್ಸೆ ಹಾಗೂ ನಿರ್ವಹಣೆ ಕ್ರಮಗಳಿಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ದಿನಾಂಕ:30.04.2021ರ ವರೆಗೆ ಜಾರಿಯಲ್ಲಿರುತ್ತದೆ. ರಾಜ್ಯ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಪ್ರತ್ಯೇಕವಾಗಿ HFW 76 ACS 2021, ದಿನಾಂಕ:12.03.2021, HFW 90 ACS 2021, ದಿನಾಂಕ:02.04.2021 ಮತ್ತು ದಿನಾಂಕ:04.04.2021ರ ತಿದ್ದುಪಡಿ ಆದೇಶದಲ್ಲಿ ಪ್ರಮಾಣಿತ ಕಾರ್ಯವಿಧಾನಗಳನ್ನು ಹೊರಡಿಸಿದೆ.

2) ಪ್ರಸ್ತುತ, ರಾಜ್ಯದಲ್ಲಿ ಕೋವಿಡ್-19 ಸೋಂಕು ಹರಡುವಿಕೆ ಉಲ್ಬಣವಾಗಿದ್ದು, ನಿಯಂತ್ರಣ ಕಾರ್ಯ ಅತ್ಯಾವಶ್ಯಕವಾಗಿದೆ.

3) ಆದ್ದರಿಂದ, ವಿಪತ್ತು ನಿರ್ವಹಣೆ ಕಾಯ್ದೆ, 2005 ರಲ್ಲಿನ ಸೆಕ್ಷನ್ 24ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **ರಾಜ್ಯಾದ್ಯಂತ ಸಾರ್ವಜನಿಕ ಸಮಾರಂಭ / ಆಚರಣೆಗಳು/ ಮನರಂಜನೆ ಕಾರ್ಯಕ್ರಮಗಳಿಗೆ ಜನರ ಒಗ್ಗೂಡುವಿಕೆಗೆ ಈ ಕೆಳಕಂಡಂತೆ ನಿಯಂತ್ರಣ ಕ್ರಮಗಳನ್ನು ಜಾರಿಗೊಳಿಸಲಾಗಿದೆ**:

| **ಕ್ರ. ಸಂ.** | **ಸಮಾರಂಭಗಳು/ ಆಚರಣೆಗಳು/ ಮನರಂಜನೆ ಕಾರ್ಯಕ್ರಮಗಳು** | **ಅವಕಾಶ ನೀಡಬಹುದಾದ ಜನರ ಸಂಖ್ಯೆ (ಗರಿಷ್ಠ ಮಿತಿ)** | **ಷರಾ** |
|---|---|---|---|
| 1 | ಸಾಮಾಜಿಕ ಆಚರಣೆಗಳು/ ಸಮಾರಂಭಗಳು | | ಭಾರತ ಸರ್ಕಾರದ ಮಾರ್ಗಸೂಚಿಯಂತೆ 3.25 Sq.meter per person ಮಾನದಂಡವನ್ನು ಪಾಲಿಸುವುದು ಕಡ್ಡಾಯವಾಗಿರುತ್ತದೆ. |
| | • ಮದುವೆ | 200 ಮೀರದಂತೆ | ತೆರೆದ ಪ್ರದೇಶಗಳು |
| | | 100 ಮೀರದಂತೆ | ಕಲ್ಯಾಣ ಮಂಟಪ/ಸಭಾಂಗಣಗಳು/ ಹಾಲ್‌ಗಳು, ಇತ್ಯಾದಿ ಮುಚ್ಚಿದ ಪ್ರದೇಶಗಳು. |
| | • ಜನ್ಮದಿನ ಹಾಗೂ ಇತರೆ ಆಚರಣೆಗಳು | 50 ಮೀರದಂತೆ | ತೆರೆದ ಪ್ರದೇಶಗಳು |
| | | 25 ಮೀರದಂತೆ | ಸಭಾಂಗಣಗಳು/ ಹಾಲ್‌ಗಳು, ಇತ್ಯಾದಿ ಮುಚ್ಚಿದ ಪ್ರದೇಶಗಳು. |
| | • ನಿಧನ / ಶವಸಂಸ್ಕಾರ | 50 ಮೀರದಂತೆ | ತೆರೆದ ಪ್ರದೇಶಗಳು |
| | | 25 ಮೀರದಂತೆ | ಸಭಾಂಗಣಗಳು/ ಹಾಲ್‌ಗಳು, ಇತ್ಯಾದಿ ಮುಚ್ಚಿದ ಪ್ರದೇಶಗಳು. |
| | • ಅಂತ್ಯ ಕ್ರಿಯೆ (Cremation / Burial) | 25 ಮೀರದಂತೆ | |
| | • ಇತರೆ ಸಮಾರಂಭಗಳು | 50 ಮೀರದಂತೆ | ಹಾಲ್‌ನ ವಿಸ್ತೀರ್ಣಕ್ಕೆ ಅನುಗುಣವಾಗಿ |

...2

| | | | |
|---|---|---|---|
| 2 | ಧಾರ್ಮಿಕ ಆಚರಣೆಗಳು/ ಸಮಾರಂಭಗಳು | ನಿಷೇಧಿಸಲಾಗಿದೆ. | |
| 3 | ರಾಜಕೀಯ ಆಚರಣೆಗಳು/ ಸಮಾರಂಭಗಳು | 200 ಮೀರದಂತೆ | ತೆರೆದ ಪ್ರದೇಶಗಳು |

4) ಮೇಲ್ಕಂಡ ಸಂದರ್ಭಗಳಲ್ಲಿ ಜನರು ಕಡ್ಡಾಯವಾಗಿ ಭಾರತ ಸರ್ಕಾರ ಮತ್ತು ರಾಜ್ಯ ಸರ್ಕಾರದ ಸಂಬಂಧಪಟ್ಟ ಇಲಾಖೆಗಳು ಹೊರಡಿಸಿರುವ ಪ್ರಮಾಣಿತ ಕಾರ್ಯ ವಿಧಾನವನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಸಭಾಂಗಣ / ಕಲ್ಯಾಣ ಮಂಟಪ / ಸಿನಿಮಾ ಮಂದಿರ / ಹಾಲ್‌ಗಳು ಮತ್ತು ಆಚರಣೆಗಾಗಿ ಜನ ಸೇರುವ ಇತ್ಯಾದಿ ಪ್ರದೇಶಗಳ ಉಸ್ತುವಾರಿ ಹೊಂದಿದವರು ಕಡ್ಡಾಯವಾಗಿ ಸ್ಯಾನಿಟೈಝೇಷನ್ ಕ್ರಮಗಳನ್ನು ಅನುಸರಿಸತಕ್ಕದ್ದು.

5) ಈ ಆದೇಶವನ್ನು ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಪೊಲೀಸ್ ಆಯುಕ್ತರು, ಬೆಂಗಳೂರು ನಗರ, ಪೊಲೀಸ್ ವರಿಷ್ಠಾಧಿಕಾರಿ, ಬೆಂಗಳೂರು ಗ್ರಾಮಾಂತರ ಮತ್ತು ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳು ಕಟ್ಟುನಿಟ್ಟಾಗಿ ಜಾರಿಗೊಳಿಸತಕ್ಕದ್ದು. ಆದೇಶ ಪಾಲನೆಯಲ್ಲಿ ಲೋಪವೆಸಗುವಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ, 2005ರ ಸೆಕ್ಷನ್ 51 ರಿಂದ 60 ಹಾಗೂ ಭಾರತೀಯ ದಂಡ ಸಂಹಿತೆ ಹಾಗೂ ಅನ್ವಯವಾಗಬಹುದಾದ ಇತರ ಕಾನೂನು ಉಪಬಂಧಗಳ ಅನುಸಾರ ಕ್ರಮ ಕೈಗೊಳ್ಳತಕ್ಕದ್ದು.

**(ಪಿ. ರವಿ ಕುಮಾರ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರು

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.